# ಸಭಾಪತಿ ವಿರುದ್ಧ ಅವಿಶ್ವಾಸ

■ **ವಿಕ ಸುದ್ದಿಲೋಕ** ಬೆಂಗಳೂರು 13/11/20

ಶಿಕ್ಷಕ ಹಾಗೂ ಪದವೀಧರ ಕ್ಷೇತ್ರದ ನಾಲ್ಕು ಕ್ಷೇತ್ರಗಳಲ್ಲಿ ಗೆದ್ದು ವಿಧಾನ ಪರಿಷತ್‌ನಲ್ಲಿ ತನ್ನ ಸಂಖ್ಯಾ ಬಲ ಹೆಚ್ಚಿಸಿಕೊಂಡಿರುವ ಬಿಜೆಪಿ, ಈಗ ಸಭಾಪತಿ ಸ್ಥಾನದ ಮೇಲೆ ಕಣ್ಣಿಟ್ಟಿದೆ. ಭೂ ಸುಧಾರಣಾ ಕಾಯಿದೆಗೆ ಪರಿಷತ್ ಒಪ್ಪಿಗೆ ಪಡೆಯುವುದಕ್ಕೆ ತಡೆ ನೀಡಿದ ಹಾಲಿ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವುದಕ್ಕೆ ಬಿಜೆಪಿ ಸದ್ದಿಲ್ಲದೆ ಸಿದ್ಧತೆ ನಡೆಸಿದೆ.

ಜನವರಿ ತಿಂಗಳಲ್ಲಿ ನಡೆಯುವ ವಿಧಾನ ಮಂಡಲ ಅಧಿವೇಶನ ಸಂದರ್ಭದಲ್ಲಿ ಮೇಲ್ಮನೆಯಲ್ಲಿ ಈ ಮಹತ್ವದ ರಾಜಕೀಯ ಪ್ರಯೋಗಕ್ಕೆ ಬಿಜೆಪಿ ಸಿದ್ಧತೆ ನಡೆಸಿದೆ. ಪರಿಷತ್‌ನಲ್ಲಿ ಸಂಖ್ಯಾ ಬಲ ಇಲ್ಲದೇ ಮಹತ್ವದ ಮಸೂದೆಗಳಿಗೆ ಒಪ್ಪಿಗೆ ಪಡೆಯುವುದಕ್ಕೆ ಒದ್ದಾಟ ನಡೆಸುತ್ತಿದ್ದ ಬಿಜೆಪಿ ಈಗ 31 ಸ್ಥಾನ ಬಲದೊಂದಿಗೆ ಮೊದಲನೇ ಸ್ಥಾನ ತಲುಪಿದೆ.

ಜೆಡಿಎಸ್ ನೆರವಿನೊಂದಿಗೆ ಅವಿಶ್ವಾಸ ನಿರ್ಣಯ ಮಂಡಿಸಲು ಬಿಜೆಪಿ ಚಿಂತನೆ ನಡೆಸಿದೆ. ಈ ಸಂಬಂಧ ಜಂಟಿ ಪತ್ರ ನೀಡುವ ಸಾಧ್ಯತೆ ಇದೆ. ಆಗ ಸಹಜವಾಗಿಯೇ ಪ್ರತಾಪ್‌ಚಂದ್ರ ಶೆಟ್ಟಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬಹುದು. ಇಲ್ಲವಾದರೆ ಅವಿಶ್ವಾಸ ನಿರ್ಣಯ ಮಂಡನೆ ಅನಿವಾರ್ಯ ಎಂದು ತಿಳಿದು ಬಂದಿದೆ. ಒಂದೊಮ್ಮೆ ಜೆಡಿಎಸ್ ಪತ್ರಕ್ಕೆ ಸಹಿ ಹಾಕದೇ ಇದ್ದರೂ ನಿರ್ಣಯವನ್ನು ಮತಕ್ಕೆ ಹಾಕುವ ಸಂದರ್ಭದಲ್ಲಿ ಸದನದಿಂದ ಹೊರಗೆ ಉಳಿಯುವ ಸಾಧ್ಯತೆ ಹೆಚ್ಚಿದೆ.



**ಯಾರು ಸಭಾಪತಿ?:** ಸಂಪುಟ ವಿಸ್ತರಣೆ ಅಥವಾ ಪುನರ್‌ರಚನೆ ಸಂದರ್ಭದಲ್ಲಿ ಸಾಕಷ್ಟು ಬದಲಾವಣೆಗಳನ್ನು ನಿರೀಕ್ಷೆ ಮಾಡಲಾಗಿದೆ. ಬಿಜೆಪಿ ಉನ್ನತ ಮೂಲಗಳ ಪ್ರಕಾರ ಮುಜರಾಯಿ ಸಚಿವ ಕೋಟ ಶ್ರೀನಿವಾಸ ಪೂಜಾರಿಯವರನ್ನು ಸಂಪುಟದಿಂದ ಕೈ ಬಿಟ್ಟು ಅವರನ್ನು ಸಭಾಪತಿ ಸ್ಥಾನದಲ್ಲಿ ಕುಳ್ಳಿರಿಸಬೇಕೆಂಬ ಲೆಕ್ಕಾಚಾರವನ್ನು ಬಿಜೆಪಿ ಹೆಣೆದಿದೆ. ಇದರಿಂದ ಒಂದೇ ಕಲ್ಲಿನಲ್ಲಿ ಎರಡು ಹಕ್ಕಿ ಹೊಡೆದಂತಾಗುತ್ತದೆ. ಸಚಿವ ಸ್ಥಾನಾಕಾಂಕ್ಷಿಯಾಗಿರುವ ವಿ. ಸುನೀಲ್‌ಕುಮಾರ್ ಅವರನ್ನು ಈಡಿಗ ಹಾಗೂ ಕರಾವಳಿ 'ಕೋಟಾ'ದಲ್ಲಿ ಸಂಪುಟಕ್ಕೆ ಸೇರಿಸಿಕೊಳ್ಳುವುದಕ್ಕೆ 'ಕೋಟ' ಅವರನ್ನು ಸಭಾಪತಿ ಪೀಠದಲ್ಲಿ ಪ್ರತಿಷ್ಠಾಪನೆ ಮಾಡುವ ಲೆಕ್ಕಾಚಾರದಿಂದ ಅನುಕೂಲವಾಗುತ್ತದೆ. ಎಲ್ಲದಕ್ಕಿಂತ ಹೆಚ್ಚಾಗಿ ಪರಿಷತ್‌ನ ಹಿರಿಯ ಸದಸ್ಯರ ಪೈಕಿ ಶ್ರೀನಿವಾಸ್ ಪೂಜಾರಿ ಒಬ್ಬರಾಗಿದ್ದು, ಹಿಂದುಳಿದ ವರ್ಗಕ್ಕೆ ಸೇರಿದ ನಾಯಕನಿಗೆ ರಾಜ್ಯದಲ್ಲಿ ಸಾಂವಿಧಾನಿಕ ಹುದ್ದೆ ಕೊಟ್ಟು ಆ ವರ್ಗಕ್ಕೆ ಸೂಕ್ತ ಸಾಮಾಜಿಕ ನ್ಯಾಯ ಕಲ್ಪಿಸಲಾಗಿದೆ ಎಂಬ ಸಂದೇಶ ರವಾನೆ ಮಾಡುವುದು ಇದರಲ್ಲಿ ಅಡಗಿದೆ.